**APRIL 22,2025**
**ALL INDIA RADIO- DHARWAD**
**PRADESH SAMACHARA (KANNADA) 12 PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಜನಸಾಮಾನ್ಯರ ಸಮಸ್ಯೆಗಳನ್ನು ಆಲಿಸಿ,** ಶೀಘ್ರ ಪರಿಹಾರ ದೊರಕಿಸಲು ಮತ್ತು ಆಡಳಿತ ಸುಧಾರಣೆಯಲ್ಲಿ 'ಜನಸ್ಪಂದನ ಕಾರ್ಯಕ್ರಮ' ಸಹಕಾರಿಯಾಗಿದೆ ಎಂದು, ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ. ಶಿವಮೊಗ್ಗದ ಈಡಿಗರ ಸಭಾ ಭವನದಲ್ಲಿ ಏರ್ಪಡಿಸಲಾಗಿದ್ದ, 'ಜನಸ್ಪಂದನ' ಕಾರ್ಯಕ್ರಮ ಉದ್ಘಾಟಿಸಿ, 116 ಅರ್ಜಿಗಳನ್ನು ಸ್ವೀಕರಿಸಿ, ಅವರು ಮಾತನಾಡಿದರು. ಮುಂಬರುವ ದಿನಗಳಲ್ಲಿ, ಎಲ್ಲ ತಾಲೂಕುಗಳಲ್ಲಿ ಜನಸ್ಪಂದನ ಕಾರ್ಯಕ್ರಮ ನಡೆಸುವಂತೆ, ಮುಖ್ಯಮಂತ್ರಿಗಳು ಸೂಚಿಸಿದ್ದಾಗಿ, ಸಚಿವರು ಹೇಳಿದರು. ಸಾಗರ ಶಾಸಕ, ಬೇಳೂರು ಗೋಪಾಲಕೃ ್ಣ ಮಾತನಾಡಿ, ಜನಸಾಮಾನ್ಯರ ಸಮಸ್ಯೆಗಳಿಗೆ ಸಹಾನುಭೂತಿಯಿಂದ ಸಿಬ್ಬಂದಿ ಸ್ಪಂದಿಸಬೇಕು ಎಂದರು.

<><><>

**ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ** ಮುದ್ರಾ ಯೋಜನೆ, ಯುವ ಉದ್ಯಮಿಗಳಿಗೆ ಸಹಕಾರಿಯಾಗಿದೆ. ಮುದ್ರಾ ಯೋಜನೆಯಡಿ ಸಾಲ ಪಡೆದು, ಒಟ್ಟು ನಾಲ್ಕು ಜನರಿಗೆ ಉದ್ಯೋಗವನ್ನು ನೀಡಿ ಯಶಸ್ವಿ ಉದ್ಯಮಿಯಾಗಿ ಸಫಲರಾಗಿದ್ದಾರೆ, ಕುಂದಾಪುರ ಮೂಲದ ಸುಮಂತ ಕುಮಾರ ಕೆ.ಎಸ್ ಅವರು. ಧಾರವಾಡ ಆಕಾಶವಾಣಿ ಸಮೀಪ ಆಹಾರ ಮಳಿಗೆಯನ್ನು ನಡೆಸುತ್ತಿರುವ ಪಿ.ಎಂ.ಎಂ.ವೈ ಫಲಾನುಭವಿ ಸುಮಂತ್ ಕುಮಾರ ಕೆ.ಎಸ್. ಅವರು ಪ್ರದೇಶ ಸಮಾಚಾರದೊಂದಿಗೆ ತಮ್ಮ ಅನುಭವ ಹಂಚಿಕೊಂಡಿದ್ದಾರೆ.

<><><>

**ಧ್ವನಿ: ಸುಮಂತ ಕುಮಾರ್ 35 ಸೆಕೆಂದುಗಳು**

<><><>

**ರಾಜ್ಯದಲ್ಲಿ ಒಟ್ಟು 136 ಎಕರೆ ಜಾಗೆಯಲ್ಲಿ,** ಡಾಕ್ಟರ್ ಎಚ್.ನರಸಿಂಹಯ್ಯ ವಿಜ್ಞಾನ, ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿ ಪ್ರಾಧಿಕಾರ ರಚನೆಯಾಗಲಿದ್ದು, ಇದರಿಂದ ಪ್ರವಾಸೋದ್ಯಮಕ್ಕೆ ಹೆಚ್ಚಿನ ಉತ್ತೇಜನ ದೊರೆಯಲಿದೆ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಎನ್.ಎಸ್.ಬೋಸರಾಜು ಹೇಳಿದರು. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು, ರಾಜ್ಯ ಸರ್ಕಾರ ಕಳೆದ ಬಜೆಟ್ ಅಧಿವೇಶನದಲ್ಲಿ ಮಂಡಿಸಿದ ಡಾ.ಎಚ್.ನರಸಿಂಹಯ್ಯ ಅಭಿವೃದ್ಧಿ ಪ್ರಾಧಿಕಾರದ ರಚನೆ ಮಸೂದೆ ಉಭಯ ಸದನದಲ್ಲಿ ಅಂಗೀಕಾರ ಪಡೆದು ರಾಜ್ಯಪಾಲರು ಸಹಿ ಹಾಕಿದ್ದಾರೆ. ಮಾನವ ಕಲ್ಯಾಣಕ್ಕಾಗಿ ವಿಜ್ಞಾನ ಮತ್ತು ತಂತ್ರಜ್ಞಾನವನ್ನು ಜನಪ್ರಿಯಗೊಳಿಸುವುದು, ಸಮಾಜಿಕ ಅಧ್ಯಯನಗಳು, ಕಲೆ ಮತ್ತು ಸಂಸ್ಕೃತಿ ಚಟುವಟಿಕೆಗಳಿಗಾಗಿ ವೇದಿಕೆಯನ್ನು ಕಲ್ಪಿಸುವುದು ಈ ಪ್ರಾಧಿಕಾರದ ಮುಖ್ಯ ಉದ್ದೇಶವಾಗಿರಲಿದೆ ಎಂದರು.

<><><>

**ಹೈನುಗಾರರಿಗೆ, ಪ್ರತಿ ಲೀಟರ್ ಹಾಲಿಗೆ 5 ರೂಪಾಯಿ** ಪ್ರೋತ್ಸಾಹ ಧನ ಹಾಗೂ ಆರ್ಥಿಕ ಅಭಿವೃದ್ಧಿಗೆ ಪ್ರತಿ ಲೀಟರ್‌ಗೆ 4 ರೂಪಾಯಿ ಹೆಚ್ಚಿಸಿ, ರಾಜ್ಯ ಸರ್ಕಾರ ಸಹಕರಿಸಿದೆ ಎಂದು, ಮಂಡ್ಯ ಜಿಲ್ಲಾ ಹಾಲು ಒಕ್ಕೂಟದ ನಿರ್ದೇಶಕ ಹರೀಶ ಬಾಬು ತಿಳಿಸಿದ್ದಾರೆ. ಮಂಡ್ಯ ಜಿಲ್ಲೆ, ಕೊಪ್ಪ ಹೋಬಳಿಯ ಸೀನಪ್ಪನದೊಡ್ಡಿ ಗ್ರಾಮದಲ್ಲಿ, ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ, ನೂತನವಾಗಿ ನಿರ್ಮಿಸಿದ, ಶುದ್ಧ ಕುಡಿಯುವ ನೀರಿನ ಘಟಕವನ್ನು ಅನಾವರಣಗೊಳಿಸಿ, ಅವರು ಮಾತನಾಡಿದರು. ಮಂಡ್ಯ ಹಾಲೂ ಒಕ್ಕೂಟ ಪ್ರತಿ ದಿನ 9 ಲಕ್ಷ ಲೀಟರ್ ಹಾಲು ಸರಬರಾಜು ಮಾಡುತ್ತಿದೆ ಎಂದರು.

<><><>

**ದಾವಣಗೆರೆ ಜಿಲ್ಲೆಯಾದ್ಯಂತ** ಬರುವ 26 ರಿಂದ ಜೂನ್ 9 ರವರೆಗೆ ಜಾನುವಾರುಗಳಿಗೆ ಉಚಿತ ಕಾಲು ಬಾಯಿ ರೋಗ ಲಸಿಕಾ ಅಭಿಯಾನ ಹಾಗೂ ಚರ್ಮಗಂಟು ರೋಗ ಲಸಿಕಾ ಅಭಿಯಾನ ಆಯೋಜಿಸಲಾಗಿದೆ ಎಂದು ಪ್ರಬಾರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಸಿಇಓ ಸುರೇಶ್ ಬಿ. ಇಟ್ನಾಳ್ ತಿಳಿಸಿದರು.

<><><>

**ರಾಜ್ಯ ಸರ್ಕಾರಿ ನೌಕರರಿಗೆ,** 7ನೇ ವೇತನ ಆಯೋಗದ ಶಿಫಾರಸು ಪ್ರಕಾರ, ಸಂಬಳ ಜಾರಿ ಮಾಡಲಾಗಿದ್ದು, ಬಜೆಟ್‌ನ ಒಟ್ಟು 19 ಸಾವಿರ ಕೋಟಿ ರೂಪಾಯಿ, ಅಧಿಕಾರಿಗಳು ಮತ್ತು ಸಿಬ್ಬಂದಿ ವೇತನಕ್ಕಾಗಿ ಖರ್ಚಾಗುತ್ತದೆ ಎಂದು, ಉನ್ನತ ಶಿಕ್ಷಣ ಖಾತೆ ಸಚಿವ ಎಂ.ಸಿ. ಸುಧಾಕರ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲಾಡಳಿತದ ಸಭಾಂಗಣದಲ್ಲಿ, ನಾಗರಿಕ ಸೇವಾ ದಿನದ ಹಿನ್ನೆಲೆ, 9 ಜನ ಸರ್ಕಾರಿ ಅಧಿಕಾರಿಗಳಿಗೆ, ಸರ್ವೋತ್ತಮ ಸೇವಾ ಪ್ರಶಸ್ತಿಗಳನ್ನು ಪ್ರದಾನ ಮಾಡಿ, ಮಾತನಾಡಿದರು.

<><><>

**ಭಾರತ್ ಸಂಚಾರ ನಿಗಮ, 'ಕನ್ನೆಕ್ಟಿಂಗ್ ವಿಥ್ ಕೇರ್'** ಧ್ಯೇಯದೊಂದಿಗೆ, ಗ್ರಾಹಕ ಸೇವಾ ಮಾಸ ಆಚರಿಸುತ್ತಿದೆ. ಬಿ.ಎಸ್.ಎನ್.ಎಲ್., ಬಳ್ಳಾರಿಯ ಪ್ರಧಾನ ವ್ಯವಸ್ಥಾಪಕರ ಕಚೇರಿಯಿಂದ, ಗ್ರಾಹಕರ ಸೇವಾ ಸಮಸ್ಯೆ ಬಗೆಹರಿಸಲು, ಇಂದು ಹಾಗೂ, 24 ಮತ್ತು 29ನೇ ತಾರೀಖು, ಬೆಳಗ್ಗೆ 10 ಗಂಟೆಯಿಂದ ಸಂಜೆ 5ರ ವರೆಗೆ, ಗ್ರಾಹಕ ಸೇವಾ ಶಿಬಿರ ಆಯೋಜಿಸಿದೆ.

<><><>

**ಬಿಜೆಪಿಯ 18 ಶಾಸಕರ ಅಮಾನತು** ಪ್ರಕರಣವನ್ನು ಹಿಂಪಡೆಯುವಂತೆ, ಪ್ರತಿಪಕ್ಷ ನಾಯಕ ಆರ್.ಅಶೋಕ ನೇತೃತ್ವದಲ್ಲಿ, ಬಿಜೆಪಿ ಶಾಸಕರು, ಸಭಾಧ್ಯಕ್ಷ ಯು.ಟಿ.ಖಾದರ್ ಅವರಿಗೆ ಮನವಿ ಸಲ್ಲಿಸಿದ್ದಾರೆ.

<><><>

**ದಾವಣಗೆರೆಯಲ್ಲಿ,** ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ, ಜನಾಕ್ರೋಶ ಯಾತ್ರೆ ನಡೆಯಿತು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.**